ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಎರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 05ನೇ ಡಿಸೆಂಬರ್, 2013

(ಸಮಯ: ಬೆಳಗ್ಗೆ 10.30 ಗಂಟೆಗೆ)

-----

1. ಶಾಸನ ರಚನೆ

I ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ವಿಧೇಯಕ, 2013

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ(ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ವಿಧೇಯಕ, 2013

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ)ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಮು.ತಿ.ನೋ.,

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಕೆ. ಕುಮಾರಸ್ವಾಮಿ ಹೆಚ್.ಡಿ.ರೇವಣ್ಣ, ಹೆಚ್.ಸಿ. ಬಾಲಕೃಷ್ಣ, ಎನ್.ಚಲುವರಾಯ ಸ್ವಾಮಿ ಹಾಗೂ ಇತರರು ಕೃಷ್ಣಾ ಜಲ ನ್ಯಾಯಾಧೀಕರಣವು ದಿನಾಂಕ: 30.12.2010ರಂದು ನೀಡಿದ್ದ ಅಂತಿಮ ಐತೀರ್ಪಿನ ವಿರುದ್ಧ ಸಲ್ಲಿಸಿದ್ದ ಸ್ಪಷ್ಟೀಕರಣ ಅರ್ಜಿಯ ಮೇಲೆ ದಿನಾಂಕ: 29.11.2013ರಂದು ನ್ಯಾಯಾಧೀಕರಣವು ನೀಡಿದ ಆದೇಶದ ಬಗ್ಗೆ

ಮತ್ತು

ಶ್ರೀಯುತರುಗಳಾದ ಜಗದೀಶ ಶೆಟ್ಟರ, ಬಸವರಾಜ ಬೊಮ್ಮಾಯಿ, ಬಾಲಚಂದ್ರ ಜಾರಕಿಹೊಳಿ, ರಮೇಶ ಬಿ. ಭೂಸನೂರ ಹಾಗೂ ಇತರರು ಕೃಷ್ಣ ಮೇಲ್ದಂಡೆ ಯೋಜನೆಯ ಕಾಮಗಾರಿಯು ನಿಧಾನಗತಿಯಲ್ಲಿ ಸಾಗುತ್ತಿರುವುದರ ಬಗ್ಗೆ

ಮತ್ತು

ಶ್ರೀ ಬಿ.ಎಸ್. ಯಡಿಯೂರಪ್ಪ ಅವರು, ಕೃಷ್ಣಾ ನ್ಯಾಯಾಧಿಕರಣವು ದಿನಾಂಕ: 29.11.2013ರಂದು ನೀಡಿರುವ ತೀರ್ಪಿನ ಬಗ್ಗೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

3. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಒಂಭತ್ತನೇ ಪಟ್ಟಿ
ಆ) ದಿನಾಂಕ 25.11.2013ರ ಮೊದಲನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ವಿ. ಸುನೀಲ ಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 3(129)	:	ಸಣ್ಣ ಕೈಗಾರಿಕೆಗಳು ಮುಜರಾಯಿ ಮತ್ತು ಸಕ್ಕರೆ ಸಚಿವರು
ಇ) ದಿನಾಂಕ 28.11.2013ರ ನಾಲ್ಕನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಹೆಚ್.ಎಸ್.ಪ್ರಕಾಶ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 60(992)	:	ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು
ಈ) ದಿನಾಂಕ 03.12.2013ರ ಏಳನೇ ಪಟ್ಟಿಯಿಂದ ವರ್ಗಾವಣೆಗೊಂಡ ಡಾ॥ ಎಸ್. ಶಿವರಾಜ್ ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 104(1487)	:	ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
ಉ) ದಿನಾಂಕ 04.12.2013ರ ಎಂಟನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಹೆಚ್.ಸಿ. ಬಾಲಕೃಷ್ಣ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 120(1089)	:	ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರು
ಊ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಒಂಭತ್ತನೇ ಪಟ್ಟಿ

4. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಅವರು 2013ನೇ ಸಾಲಿನ ಸಮಿತಿಯ ಎರಡನೇ ವರದಿಯನ್ನು ಒಪ್ಪಿಸುವುದು.

5. ಅರ್ಜಿಯನ್ನೊಪ್ಪಿಸುವುದು

ಶ್ರೀ ಎಂ.ಪಿ. ಅಪ್ಪಚ್ಚು (ರಂಜನ್) (ಸದಸ್ಯರು, ಅರ್ಜಿಗಳ ಸಮಿತಿ) ಅವರು:-

i) ಶ್ರೀ ಗದಗ ಜಿಲ್ಲೆ, ಶಿರಹಟ್ಟಿ ತಾಲ್ಲೂಕಿನ ಬನ್ನಿಕೊಪ್ಪ ಗ್ರಾಮದಿಂದ ಮುರಡಿ ತಾಂಡಾ ಗ್ರಾಮದವರೆಗಿನ ರಸ್ತೆಯನ್ನು ಅಭಿವೃದ್ಧಿಪಡಿಸುವ ಬಗ್ಗೆ.

ii) ಹಿರೇಕೆರೂರು ತಾಲ್ಲೂಕು ಮೈದೂರು ಗ್ರಾಮಪಂಚಾಯತಿಯಲ್ಲಿ ದಾಖಲಾತಿಯನ್ನು ಸೂಕ್ತ ರೀತಿಯಲ್ಲಿ ನಮೂದಿಸುವ ಬಗ್ಗೆ.

iii) ಕಲಘಟಗಿ ತಾಲ್ಲೂಕು ಗಂಜಿಗಟ್ಟಿ ಗ್ರಾಮಕ್ಕೆ ರಸ್ತೆ ಅಭಿವೃದ್ಧಿ ಮತ್ತು ಮೂಲಭೂತ ಸೌಲಭ್ಯವನ್ನು ಒದಗಿಸುವ ಬಗೆಗಿನ ಅರ್ಜಿಗಳನ್ನು ಒಪ್ಪಿಸುವುದು.

6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಟಿ. ವೆಂಕಟರಮಣಯ್ಯ ಅವರು ದೊಡ್ಡಬಳ್ಳಾಪುರ ತಾಲ್ಲೂಕಿನ ಸಾಸಲು ಹೋಬಳಿ ಹೊಸಳ್ಳಿ ಹಳ್ಳಕ್ಕೆ ಚೆಕ್ ಡ್ಯಾಂ ನಿರ್ಮಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

2. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ತಾಲ್ಲೂಕಿನ ಕಳಸ ಹೋಬಳಿಯ ಶ್ರೀ ಕಳಸೇಶ್ವರ ದೇವಸ್ಥಾನಕ್ಕೆ ಸೇರಿದ ಭೂಮಿಯನ್ನು ಇನಾಂ ಮೀಸಲು ಅರಣ್ಯ ಭೂಮಿಯೆಂದು ಘೋಷಣೆಯಾಗಿರುವುದರಿಂದ ಅಲ್ಲಿನ 6777 ಎಕರೆ ಭೂಮಿಯನ್ನು ಅರಣ್ಯ ಇಲಾಖೆಗೆ ವರ್ಗಾಯಿಸಬೇಕೆಂದು ರಾಜ್ಯದ ಉಚ್ಚನ್ಯಾಯಾಲಯವು ನೀಡಿರುವ ತೀರ್ಪಿನಿಂದಾಗಿ ಸಾಗುವಳಿ ಮಾಡಿಕೊಂಡಿರುವ ರೈತರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

3. ಶ್ರೀ ರಾಜು ಅಲಗೂರು ಅವರು ಬಿಜಾಪುರ ನಗರದಲ್ಲಿ ವಿಮಾನ ನಿಲ್ದಾಣ ನಿರ್ಮಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4. ಶ್ರೀ ಎ.ಮಂಜು ಅವರು ರಾಜ್ಯದ ವಿವಿಧಡೆಯಿರುವ ಕ್ಲಬ್‌ಗಳ ಕಾರ್ಯವೈಖರಿಯ ಬಗ್ಗೆ ವಿಚಾರಣೆ ನಡೆಸಲು ರಚಿತವಾಗಿದ್ದ ಡಾ॥ ಹೇಮಚಂದ್ರ ಸಾಗರ ಅವರ ಅಧ್ಯಕ್ಷತೆಯಲ್ಲಿನ ಸದನ ಸಮಿತಿಯು ನೀಡಿರುವ ವರದಿಯ ಶಿಫಾರಸ್ಸನ್ನು ಜಾರಿಗೆ ತರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5. ಶ್ರೀಯುತರುಗಳಾದ ಕೆ.ಎಂ. ಶಿವಲಿಂಗೇಗೌಡ ಹೆಚ್.ಡಿ. ರೇವಣ್ಣ, ಮತ್ತು ಸಿ.ಎನ್. ಬಾಲಕೃಷ್ಣ ಅವರುಗಳು ಹಾಸನ ಜಿಲ್ಲೆಯ ಸರ್ಕಾರಿ ಕೃಷಿ ಕಾಲೇಜಿನ ಹಂತ 1 ಮತ್ತು 2ರ ಕಾಮಗಾರಿಗಳಿಗಾಗಿ ಅವಶ್ಯಕ ಅನುದಾನ ಬಿಡುಗಡೆಯಾಗದೆ ಕಾಮಗಾರಿಗಳು ಅಪೂರ್ಣಗೊಂಡಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

6. ಡಾ.ಕೆ. ಸುಧಾಕರ್, ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಮತ್ತು ಶ್ರೀ ಬಿ.ಎಂ. ನಾಗರಾಜು ಅವರುಗಳು ಬೆಂಗಳೂರು ನಗರದಲ್ಲಿ ಊಟೋಪಚಾರ ಹಾಗೂ ಮನರಂಜನೆಗೆ ನಿಗದಿ ಮಾಡಿರುವ ಸಮಯಾವಕಾಶವನ್ನು ತಡರಾತ್ರಿಯವರೆವಿಗೂ ವಿಸ್ತರಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

7. ಶ್ರೀ ಹೆಚ್.ಎಸ್. ಶಿವಶಂಕರ್ ಅವರು ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕಿನಲ್ಲಿ ಬೈರನಪಾದ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

8. ಶ್ರೀ ಈ. ತುಕಾರಾಂ ಅವರು ಬಳ್ಳಾರಿ ಜಿಲ್ಲೆ ಸಂಡೂರು ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 63ರ ಕುರೇಕುಪ್ಪ ಗ್ರಾಮದ ಹತ್ತಿರ ತುಂಗಭದ್ರಾ ಕಾಲುವೆಯ ಸೇತುವೆಯು ಸಂಪೂರ್ಣವಾಗಿ ಕುಸಿದಿರುವ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

9. ಶ್ರೀ ಬಿ.ಆರ್. ಯಾವಗಲ್ ಅವರು ನರಗುಂದ ಪಟ್ಟಣದ ಒಳಚರಂಡಿ ಯೋಜನೆ ಪೂರ್ಣಗೊಳ್ಳದೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

10. ಶ್ರೀ ಕೆ.ಬಿ. ಪ್ರಸನ್ನಕುಮಾರ್ ಅವರು ಕೊಳಚೆ ನಿರ್ಮೂಲನ ಮಂಡಳಿಯಿಂದ ಕೊಳಚೆ ಪ್ರದೇಶದಲ್ಲಿರುವ ಮನೆಗಳಿಗೆ ಹಕ್ಕುಪತ್ರ ವಿತರಣೆಯಲ್ಲಿ ಮಾಡುತ್ತಿರುವ ತಾರತಮ್ಯ ಮತ್ತು ವಿಳಂಬದ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

11. ಶ್ರೀ ಯು.ಬಿ. ಬಣಕಾರ ಅವರು ರಾಜ್ಯದಲ್ಲಿ ಮರಳು ಅಭಾವದಿಂದ ಕಟ್ಟಡ ಕಾಮಗಾರಿಗಳು ಸ್ಥಗಿತಗೊಂಡಿರುವುದರಿಂದ ಸಾರ್ವಜನಿಕರಿಗೆ ಮತ್ತು ಕಾರ್ಮಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

12. ಶ್ರೀ ಕೆ.ಎಂ.ಶಿವಲಿಂಗೇಗೌಡ ಅವರು ಗ್ರಾಮ ಕೋಶದ ರಚನೆ ಕುರಿತು ಸರ್ಕಾರವು ಕೈಗೊಂಡಿರುವ ಕ್ರಮದ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

13. ಶ್ರೀ ಕೆ.ಜಿ.ಬೋಪಯ್ಯ ಅವರು ಕೊಡಗು ಜಿಲ್ಲೆಯ ಜಮ್ಮಾಬಾಣೆಗಳಿಗೆ ಸಂಬಂಧಿಸಿದ ಎಲ್ಲಾ ಬಾಣೆ ಜಾಗಗಳಿಗೆ ಕಂದಾಯ ವಿಧಿಸುವಂತೆ ಭೂ ಕಂದಾಯ ಕಾಯಿದೆ ಕಲಂ ೮೦ಕ್ಕೆ ತಿದ್ದುಪಡಿ ತಂದಿದ್ದರೂ ಇದುವರೆಗೂ ಅನುಷ್ಠಾನಕ್ಕೆ ತಂದಿಲ್ಲದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

14. ಶ್ರೀ ಎಸ್.ಚಿಕ್ಕಮಾದು ಅವರು ಮೈಸೂರು ಜಿಲ್ಲೆ ಹೆಚ್.ಡಿ. ಕೋಟೆ ತಾಲ್ಲೂಕಿನಲ್ಲಿ ಒಂದೇ ವಾರದಲ್ಲಿ ಹುಲಿ ಮತ್ತು ಆನೆ ತುಳಿತಕ್ಕೆ ನಾಲ್ಕು ಜನ ರೈತರು ಸಾವನಪ್ಪಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

15. ಶ್ರೀ ಡಿ.ನಾಗರಾಜಯ್ಯ ಅವರು ಕುಣಿಗಲ್ ಪಟ್ಟಣದಲ್ಲಿ ತುಮಕೂರು-ಮದ್ದೂರು ರಸ್ತೆಯು ರಾಜ್ಯ ಹೆದ್ದಾರಿಯಾಗಿದ್ದು 14 ಮೀಟರ್ ಅಗಲ ರಸ್ತೆಯನ್ನು 22 ಮೀಟರ್‌ಗಳಿಗೆ ಅಗಲೀಕರಣಗೊಳಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

16. ಶ್ರೀ ಪಿ. ರಾಜೀವ್ ಅವರು ಎ.ಪಿ.ಎಲ್ ಕಾರ್ಡುದಾರರಿಗೆ ಸೀಮೆ ಎಣ್ಣೆ ವಿತರಣೆ ಮಾಡುತ್ತಿಲ್ಲವಾದ್ದರಿಂದ ಗ್ರಾಮೀಣ ಪ್ರದೇಶದ ಜನರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರ ಗಮನ ಸೆಳೆಯುವುದು.

17. ಶ್ರೀ ಬಿ. ಶಿವಣ್ಣ ಅವರು ಆನೇಕಲ್‌ನಲ್ಲಿರುವ ಕೆಲವು ಜನರು ಸರ್ಕಾರಿ ಜಮೀನು ರಾಜಕಾಲುವೆ ಮತ್ತು ಸರ್ಕಾರಿ ಕೆರೆಗಳನ್ನು ಒತ್ತುವರಿ ಮಾಡಿಕೊಳ್ಳುತ್ತಿರುವುದರಿಂದ ಸರ್ಕಾರವು ಅದನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

18. ಶ್ರೀ ಬಿ.ಎಸ್. ಯಡಿಯೂರಪ್ಪ ಮತ್ತು ಡಾ|| ವಿಶ್ವನಾಥ ಈ. ಪಾಟೀಲ್ ಅವರು ಉತ್ತರ ಕರ್ನಾಟಕ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಬೆಳಗಾವಿಯಲ್ಲಿ ನಿರ್ಮಿಸಲಾದ ಸುವರ್ಣ ವಿಧಾನಸೌಧದಲ್ಲಿ ಸರ್ಕಾರಿ ಕಛೇರಿಗಳನ್ನು ಸ್ಥಳಾಂತರಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

19. ಶ್ರೀ ಯಶವಂತರಾಯಗೌಡ ಪಾಟೀಲ್ ಅವರು ರಾಜ್ಯದ 5 ವಿದ್ಯುತ್ ಕಂಪನಿಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ನೌಕರರನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

20. ಶ್ರೀ ಸಿ.ಟಿ. ರವಿ ಅವರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರ ಸೇವೆಯನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

21. ಶ್ರೀ ತನ್ವೀರ್ ಸೇಠ್ ಅವರು ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ಇತ್ತೀಚೆಗೆ ನಡೆದ ಎಸ್.ಸಿ.ವಿ.ಟಿ ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

22. ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ, ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆ ಹೇಮಾವತಿ ಯೋಜನೆಯ ವಲಯದ ವ್ಯಾಪ್ತಿಯಲ್ಲಿ ಬರುವ ಪುರಾತನ ಕಾಲದ ದೇವಾಲಯಗಳ ಜೀರ್ಣೋದ್ಧಾರಕ್ಕಾಗಿ ಹಣ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

23. ಡಾ|| ವಿಶ್ವನಾಥ ಈ ಪಾಟೀಲ್ ಅವರು ಸುಮಾರು ಹತ್ತು ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಕರ್ನಾಟಕ ವಿದ್ಯುತ್ ಮಂಡಳಿಯಲ್ಲಿ ಸೇವೆ ಸಲ್ಲಿಸುತ್ತಿರುವ ಮೀಟರ್ ರೀಡರ್‌ಗಳನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

24. ಶ್ರೀಮತಿ ಶಾರದಾ ಮೋಹನ ಶೆಟ್ಟಿ ಅವರು ಉತ್ತರ ಕನ್ನಡ ಜಿಲ್ಲೆಯಲ್ಲಿ ಬರುವ ರಾಮ ಕ್ಷತ್ರಿಯ ಸಮಾಜದ ಶೇರುಗಾರ ಜಾತಿಯ ಜನರ ಜಾತಿ ಪ್ರಮಾಣ ಪತ್ರದಲ್ಲಿ ಶೇರುಗಾರ ಬದಲಿಗೆ ಶೇರೆಗಾರರಯೆಂದು ನಮೂದಿಸಲಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

25. ಶ್ರೀ ಮಂಕಾಳ ಎಸ್. ವೈದ್ಯ ಅವರು ಉತ್ತರ ಕನ್ನಡ ಜಿಲ್ಲೆಯ ಶರಾವತಿ ನದಿಯ ಎಡ ಮತ್ತು ಬಲ ದಂಡೆಯಲ್ಲಿ ವಾಸಿಸುವ ಜನರಿಗೆ ಲಿಂಗನಮಕ್ಕಿ ಡ್ಯಾಂನಿಂದ ಹರಿಯುವ ನೀರಿನಿಂದ ತೊರೆಯಾಗುತ್ತಿದ್ದು ಆ ಜನರಿಗೆ ಶಾಶ್ವತ ಪರಿಹಾರ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

26. ಶ್ರೀ ಜಗದೀಶ ಶೆಟ್ಟರ್ ಅವರು ಹುಬ್ಬಳ್ಳಿ-ಧಾರವಾಡ ಮಧ್ಯದಲ್ಲಿ ಮಂಜೂರಾಗಿರುವ ಬಿಆರ್‌ಟಿಎಸ್ ಯೋಜನೆಯ ಅಡಿಯಲ್ಲಿ ಬರುವ ಚತುಷ್ಪಥ ರಸ್ತೆ ಕಾಮಗಾರಿಯ ಪ್ರಗತಿಯ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

27. ಶ್ರೀಯುತರಾದ ಎಸ್. ಆರ್. ವಿಶ್ವನಾಥ್ ಮತ್ತು ಡಿ. ನಾಗರಾಜಯ್ಯ ಅವರು ರಾಜ್ಯದ ಕಾರಗೃಹಗಳಲ್ಲಿರುವ ಮನ: ಪರಿವರ್ತನಾ ಕೈದಿಗಳನ್ನು ಸನ್ನಡತೆಯ ಆಧಾರದ ಮೇಲೆ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

28. ಶ್ರೀ ಆರ್.ಅಶೋಕ ಮತ್ತು ಡಾ|| ಸಿ.ಎನ್.ಅಶ್ವಥ್‌ನಾರಾಯಣ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಗಳಿಗೆ ವಿದ್ಯುತ್ ಬಿಲ್ ಪಾವತಿಸಿದ್ದಾಗ್ಯೂ ಸಹ ಮುಂದಿನ ಬಿಲ್‌ನಲ್ಲಿ ದಂಡದ ರೂಪದಲ್ಲಿ ಪುನ: ಬಿಲ್ ಬರುತ್ತಿರುವುದರ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

29. ಶ್ರೀ ಗುರು ಪಾಟೀಲ್ ಶಿರವಾಳ ಅವರು ಶಹಪುರ ಕ್ಷೇತ್ರ ವ್ಯಾಪ್ತಿಯ ಗ್ರಾಮಪಂಚಾಯತ್‌ಗಳು ಕೈಗೊಳ್ಳುತ್ತಿರುವ ವಸತಿ ಯೋಜನೆಗಳಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

30. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು ಬಿಜಾಪುರ ಜಿಲ್ಲೆಯಾದ್ಯಂತ ಮರಳಿನ ಕೊರತೆಯುಂಟಾಗಿರುವುದರಿಂದ ಸಾರ್ವಜನಿಕರಿಗೆ ಕಟ್ಟಡಗಳನ್ನು ಕಟ್ಟಲು ತೀವ್ರ ತೊಂದರೆಯಾಗುತ್ತಿರುವುದರಿಂದ, ನದಿ ಮೂಲಗಳಿಂದ ಮರಳು ಶೇಖರಣೆ ಮಾಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

31. ಶ್ರೀ ಸಂಜಯ ಬಿ. ಪಾಟೀಲ್ ಅವರು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ವಿದ್ಯಾರ್ಥಿಗಳನ್ನು ಭರ್ತಿ ಮಾಡಿಕೊಳ್ಳುವಾಗ ಸೂಕ್ತ ಪ್ರವೇಶಾವಕಾಶವನ್ನು ಆಡಳಿತ ಮಂಡಳಿಯವರಿಗೆ ಬಿಟ್ಟುಕೊಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

32. ಶ್ರೀ ಎನ್.ಚಲುವರಾಯಸ್ವಾಮಿ ಅವರು ಹಟ್ಟಿ ಚಿನ್ನದ ಗಣಿಯಿಂದ ಹೊರಬರುವ ತ್ಯಾಜ್ಯವನ್ನು ಸೂಕ್ತ ಸ್ಥಳಕ್ಕೆ ವಿಲೇವಾರಿ ಮಾಡುವುದರ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

33. ಶ್ರೀ ಎಸ್. ಮಧು ಬಂಗಾರಪ್ಪ ಅವರು ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ ಕೋಟಿಪುರದಲ್ಲಿರುವ ವಿದ್ಯುತ್ ಪ್ರಸರಣದ ಶಕ್ತಿ ಪರಿವರ್ತಕವನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

34. ಶ್ರೀ ಅಪ್ಪಾಜಿ ನಾಡಗೌಡ ಅವರು ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕಿನ ತಂಗಡಿ-ನಾಲತವಾಡ ಲಿಂಕ್ ರಸ್ತೆಯನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

35. ಶ್ರೀ ಕೆ.ಆರ್.ರಮೇಶ್‌ಕುಮಾರ್ ಅವರು ರಾಜ್ಯದಲ್ಲಿ ಇತ್ತೀಚೆಗೆ ಹಲವಾರು ಜಾನುವಾರುಗಳು ಕಾಲುಬಾಯಿ ಜ್ವರದಿಂದ ಬಳಲಿ ಮೃತಪಟ್ಟಿದ್ದರಿಂದ ಸಂಕಷ್ಟಕ್ಕೀಡಾದ ರೈತರುಗಳಿಗೆ ಪರಿಹಾರ ನೀಡುವ ಬಗ್ಗೆ ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

36. ಶ್ರೀ ಡಿ.ಬಿ. ಇನಾಂದಾರ ಅವರು ನೂತನವಾಗಿ ತಾಲ್ಲೂಕು ರಚನೆಯಾಗಿರುವ ಕಿತ್ತೂರಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

37. ಶ್ರೀ ಹೆಚ್.ಡಿ.ರೇವಣ್ಣ ಮತ್ತು ಸಿ.ಎನ್. ಬಾಲಕೃಷ್ಣ ಅವರು ಹಾಸನ ಮತ್ತು ಹೊಳೆನರಸೀಪುರ ಡಿಪ್ಲೋಮ ಕಾಲೇಜುಗಳಲ್ಲಿ ಸಂಜೆ ತರಗತಿಗಳನ್ನು ನಡೆಸಲು ಅನುಮತಿ ನೀಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ ,ಅಶೋಕ ಖೇಣಿ ಮತ್ತು ಯು.ಬಿ. ಬಣಕಾರ ಅವರುಗಳು ಉತ್ತರ ಕರ್ನಾಟಕ ಸಮಗ್ರ ಅಭಿವೃದ್ಧಿ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹೆಚ್.ಡಿ.ರೇವಣ್ಣ, ಕೆ.ಗೋಪಾಲಯ್ಯ ಹಾಗೂ ಇತರರು ಬೆಂಗಳೂರು ಉತ್ತರ ತಾಲ್ಲೂಕು ಕಸಬಾ ಹೋಬಳಿ ನಾಗಶೆಟ್ಟಿಹಳ್ಳಿ ಹಾಗೂ ಭೂಪಸಂದ್ರ ಗ್ರಾಮದ ಕರ್ನಾಟಕ ಹಾಲು ಮಹಾಮಂಡಳಿಗೆ ಸೇರಿದ ಆಸ್ತಿಯನ್ನು ಭೂ ಮಾಫಿಯಾದೊಂದಿಗೆ ಶಾಮೀಲಾಗಿ ಸುಳ್ಳು ದಾಖಲೆಯನ್ನು ಸೃಷ್ಟಿಸಿ ಸರ್ಕಾರವನ್ನು ವಂಚಿಸುತ್ತಿರುವ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹೆಚ್.ಡಿ.ರೇವಣ್ಣ, ಕೆ.ಗೋಪಾಲಯ್ಯ ಹಾಗೂ ಇತರರು ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಹುಹಳ್ಳಿಗಳ ಕುಡಿಯುವ ನೀರು ಯೋಜನೆಗೆ ಹಣ ಬಿಡುಗಡೆಯಾಗಿದ್ದರೂ ಆ ಹಣ ಬಳಸಿಕೊಳ್ಳದೇ ಇರುವುದರಿಂದ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿರುವ ಬಗ್ಗೆ ಚರ್ಚೆ.

4. ಶ್ರೀಯುತರುಗಳಾದ ಜಗದೀಶ ಶೆಟ್ಟರ, ಗೋವಿಂದ ಎಂ.ಕಾರಜೋಳ, ಎಸ್. ಸುರೇಶ್ ಕುಮಾರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಮತ್ತು ಲಕ್ಷ್ಮಣ ಸವದಿ ಹಾಗೂ ಇತರರು ರಾಜ್ಯದಲ್ಲಿ ಇತ್ತೀಚೆಗೆ ಜಾನುವಾರುಗಳು ಕಾಲುಬಾಯಿ ರೋಗಕ್ಕೆ ತುತ್ತಾಗಿ ಸಾವನ್ನಪ್ಪುತ್ತಿರುವುದರಿಂದ, ಕಾಲುಬಾಯಿ ರೋಗ ತಡೆಗೆ ಸರ್ಕಾರವು ಅಗತ್ಯ ಕ್ರಮಕೈಗೊಳ್ಳುವ ಮತ್ತು ಸೂಕ್ತ ಪರಿಹಾರ ನೀಡುವ ಬಗ್ಗೆ ಚರ್ಚೆ.

5. ಶ್ರೀ ಜೆ.ಆರ್.ಲೋಬೊ, ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಮತ್ತು ಬಿ.ಎ. ಮೊಹಿದ್ದೀನ್ ಬಾವಾ ಅವರುಗಳು, ಮಂಗಳೂರು ವಿಶ್ವವಿದ್ಯಾನಿಲಯದ ಪ್ರೊಫೆಸರ್, ಸಹ ಪ್ರೊಫೆಸರ್ ಮತ್ತು ಸಹಾಯಕ ಪ್ರೊಫೆಸರುಗಳ ನೇಮಕಾತಿಯಲ್ಲಿ ನಡೆದ ಅವ್ಯಹಾರದ ಬಗ್ಗೆ ಚರ್ಚೆ.

ಮು.ತಿ.ನೋ.,

6. ಶ್ರೀಯುತರುಗಳಾದ ಆರ್.ಅಶೋಕ, ವಿ.ಸುನೀಲಕುಮಾರ್, ಸಿ.ಟಿ.ರವಿ ಮತ್ತು ಬಿ.ಎನ್. ವಿಜಯಕುಮಾರ ಅವರುಗಳು ರಾಜ್ಯದಲ್ಲಿ ಬ್ಯಾಂಕ್-ಎ.ಟಿ.ಎಂ ಗಳಲ್ಲಿ ಹಾಗೂ ವಿವಿಧೆಡೆ ನಡೆಯುತ್ತಿರುವ ಹಲ್ಲೆ, ದರೋಡೆ ಮತ್ತು ಕೋಮು ಹಿಂಸಾಚಾರ ಘಟನೆಗಳು ಸೇರಿದಂತೆ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿರುವ ಬಗ್ಗೆ ಚರ್ಚೆ.

7. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಜಿ.ಟಿ. ದೇವೇಗೌಡ, ಎನ್. ಚಲುವರಾಯ ಸ್ವಾಮಿ ಮತ್ತು ಮಧು ಬಂಗಾರಪ್ಪ ಹಾಗೂ ಇತರರು ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಕಳಪೆ ಗುಣಮಟ್ಟದ ಔಷಧಿಗಳ ಸರಬರಾಜಿನಿಂದಾಗಿ ರೋಗಿಗಳಿಗೆ ತೊಂದರೆಯಾಗಿರುವ ಬಗ್ಗೆ ಚರ್ಚೆ.

8. ಶ್ರೀಯುತರುಗಳಾದ ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸಂಗಪ್ಪ ಸವದಿ, ಭರಮಗೌಡ ಆಲಗೌಡ ಕಾಗೆ ಅವರುಗಳು ಕೇಂದ್ರ ಸರ್ಕಾರದ ನೀರಾವರಿ ಇಲಾಖೆಯು ಎಐಬಿಪಿ ಹೊಸ ನಿಯಮಗಳನ್ನು ಜಾರಿಗೆ ತಂದಿದ್ದು ನಮ್ಮ ರಾಜ್ಯದಲ್ಲಿ ಈಗಾಗಲೇ ಎಐಬಿಪಿ ಅಡಿಯಲ್ಲಿರುವ ಯೋಜನೆಗಳು ಹಾಗೂ ಹೊಸದಾಗಿ ಸೇರ್ಪಡೆಯಾಗಿರುವ ಯೋಜನೆಗಳನ್ನು ಇ.ಆರ್.ಎಂ. ಮತ್ತು ಕಾಡಾ ಸ್ಕೀಂಗಳಡಿಯಲ್ಲಿ ಬಳಸಬಹುದಾದ ಪರಿಣಾಮಗಳ ಬಗ್ಗೆ ಚರ್ಚೆ.

9. ಶ್ರೀಯುತರುಗಳಾದ ಎಸ್.ಮಧುಬಂಗಾರಪ್ಪ, ಕೆ.ಎಂ.ಶಿವಲಿಂಗೇಗೌಡ, ಸಿ.ಎನ್.ಬಾಲಕೃಷ್ಣ, ಬಿ.ಬಿ. ನಿಂಗಯ್ಯ ಹಾಗೂ ಇತರರು ರಾಜ್ಯದ ಅರಣ್ಯ ಜಮೀನುಗಳಲ್ಲಿ ಬಗರ್‌ಹುಕುಂ ಸಾಗುವಳಿ ಮಾಡುತ್ತಿರುವ ರೈತರಿಗೆ ಹಾಗೂ ಅರಣ್ಯವಾಸಿಗಳಿಗೆ ಹಕ್ಕುಗಳನ್ನು ಮಾನ್ಯ ಮಾಡುವ ಸಲುವಾಗಿ ಅಧಿನಿಯಮ 2006, 2008 ಹಾಗೂ 2012ರ ಕಾಯ್ದೆ ಅನ್ವಯ ಗ್ರಾಮ ಸಮಿತಿಗಳನ್ನು ರಚಿಸಲು ಹಾಗೂ ಬಗರ್‌ಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರಗಳನ್ನು ವಿಸ್ತರಿಸುವ ಬಗ್ಗೆ ಚರ್ಚೆ.

10. ಶ್ರೀಯುತರುಗಳಾದ ಡಾ॥ ಕೆ. ಸುಧಾಕರ, ಬಿ.ಎಂ.ನಾಗರಾಜ್, ಎಸ್.ಎನ್. ಸುಬ್ಬಾರೆಡ್ಡಿ, ಎಸ್.ಎನ್. ನಾರಾಯಣಸ್ವಾಮಿ ಹಾಗೂ ಇತರರು ಚಿಕ್ಕಬಳ್ಳಾಪುರ ಜಿಲ್ಲೆ ನಂದಿ ಹೋಬಳಿಯ ನೆಲಮಾಕಲಹಳ್ಳಿ ಗ್ರಾಮಗಳಲ್ಲಿ ಜವಳಿ ಪಾರ್ಕ್ ನಿರ್ಮಿಸಲು ಮಂಜೂರು ಮಾಡಲಾದ 84 ಎಕರೆ ಭೂಮಿಯನ್ನು ಕೃಷಿ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲು ಸರ್ಕಾರವು ತೀರ್ಮಾನ ತೆಗೆದುಕೊಂಡಿರುವುದರ ಬಗ್ಗೆ ಚರ್ಚೆ.

11. ಶ್ರೀಯುತರುಗಳಾದ ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸವದಿ, ಭರಮಗೌಡ ಕಾಗೆ, ಸಿ.ಟಿ.ರವಿ, ಹಾಗೂ ಡಿ.ಎನ್. ಜೀವರಾಜ್ ಅವರುಗಳು ಕೇಂದ್ರ ಸರ್ಕಾರವು ಪಶ್ಚಿಮಘಟ್ಟ ಪರಿಸರ ಹಾಗೂ ಅರಣ್ಯ ರಕ್ಷಣೆಗಾಗಿ ಹೊರಡಿಸಿದ ಆದೇಶದಿಂದ ರಾಜ್ಯದ ಪಶ್ಚಿಮಘಟ್ಟ ಪ್ರದೇಶಗಳಲ್ಲಿ ವಾಸಿಸುತ್ತಿರುವ ಜನರ ಮೇಲೆ ಆಗುತ್ತಿರುವ ಪರಿಣಾಮಗಳ ಬಗ್ಗೆ ಚರ್ಚೆ.

12. ಶ್ರೀಯುತರುಗಳಾದ ಕೆ.ಬಿ. ಪ್ರಸನ್ನ ಕುಮಾರ್, ಪ್ರಿಯಾಂಕ ಖರ್ಗೆ, ಶಾರದಾ ಪೂರ್ಯ ನಾಯಕ ಅವರುಗಳು ಶಿವಮೊಗ್ಗ ಮತ್ತು ಗುಲಬರ್ಗಾ ನಗರಗಳಲ್ಲಿ ನಡೆಯುತ್ತಿದ್ದ ವಿಮಾನ ನಿಲ್ದಾಣ ಕಾಮಗಾರಿಯನ್ನು ಸ್ಥಗಿತಗೊಳಿಸಿರುವ ಬಗ್ಗೆ ಚರ್ಚೆ.

13. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಕೆ. ಕುಮಾರಸ್ವಾಮಿ, ಬಿ.ಬಿ.ನಿಂಗಯ್ಯ, ವೈ.ಎಸ್.ವಿ.ದತ್ತಾ ಮತ್ತು ಎಸ್. ಮಧು ಬಂಗಾರಪ್ಪ ಅವರುಗಳು ಚಿಕ್ಕಮಗಳೂರು ಶಿವಮೊಗ್ಗ ಮತ್ತು ಕೊಡುಗು ಜಿಲ್ಲೆಗಳಲ್ಲಿ ಅಕಾಲಿಕ ಭಾರೀ ಮಳೆಯುಂಟಾದ ಹಿನ್ನಲೆಯಲ್ಲಿ ಕಾಫೀ ಏಲಕ್ಕಿ ಮತ್ತು ಮೆಣಸಿನ ಬೆಳೆಗಳು ನಾಶವಾಗಿರುವುದರಿಂದ ರೈತರಿಗೆ ನಷ್ಟವುಂಟಾಗಿದ್ದು ಅಂತಹ ರೈತರಿಗೆ ಸೂಕ್ತ ಪರಿಹಾರ ನೀಡುವ ಬಗ್ಗೆ ಚರ್ಚೆ.

14. ಶ್ರೀಯುತರುಗಳಾದ ಬಿ.ಸುರೇಶ್‌ಗೌಡ ಮತ್ತು ಡಾ॥ ರಫೀಕ್ ಅಹ್ಮದ್ ಎಸ್ ಅವರುಗಳು ಹೇಮಾವತಿ ಜಲಾಶಯದಿಂದ ತುಮಕೂರು ಬ್ರಾಂಚ್ ಕೆನಾಲ್‌ಗೆ ಹಂಚಿಕೆಯಾಗಿರುವ ಬಾಕಿ ನೀರನ್ನು ವರ್ಷದಲ್ಲಿ 8 ತಿಂಗಳು ಹರಿಸಲು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚೆ.

15. ಶ್ರೀ ಎನ್. ಚಲುವರಾಯಸ್ವಾಮಿ, ಅವರು ರಾಜ್ಯದಲ್ಲಿ ಇತ್ತೀಚೆಗೆ ಹಲವಾರು ಜಾನುವಾರುಗಳು ಕಾಲುಬಾಯಿ ಜ್ವರದಿಂದ ಬಳಲಿ ಮೃತಪಟ್ಟಿದ್ದರಿಂದ ಸಂಕಷ್ಟಕ್ಕೀಡಾದ ರೈತರಗಳಿಗೆ ಪರಿಹಾರ ನೀಡುವ ಬಗ್ಗೆ ಚರ್ಚೆ.

16. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಡಿ.ನಾಗರಾಜಯ್ಯ, ಹೆಚ್.ಡಿ.ರೇವಣ್ಣ, ಕೆ.ಎಂ. ಶಿವಲಿಂಗೇಗೌಡ ಮತ್ತು ಎಸ್. ಮಧು ಬಂಗಾರಪ್ಪ ಅವರುಗಳು ರಾಜ್ಯದಲ್ಲಿ ಕೆಲವು ಜಿಲ್ಲೆಗಳಲ್ಲಿ ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿರುವಂತೆ ಜಿಲ್ಲಾಧಿಕಾರಿಯಿಂದ ವರದಿ ಬಂದಿದ್ದರೂ ಸಹ ಸರ್ಕಾರವು ಆ ಬಗ್ಗೆ ಘೋಷಣೆ ಮಾಡದಿರುವ ಬಗ್ಗೆ ಚರ್ಚೆ.

17. ಶ್ರೀಯುತರುಗಳಾದ ಬಿ.ಎಸ್.ಯಡಿಯೂರಪ್ಪ, ಯು.ಬಿ.ಬಣಕಾರ ಮತ್ತು ಡಾ॥ ವಿ.ಐ. ಪಾಟೀಲ್ ಅವರುಗಳು ಅನ್ನಭಾಗ್ಯ ಯೋಜನೆಯಡಿ ಬಿಪಿಎಲ್ ಕಾರ್ಡುದಾರರಿಗೆ ಪ್ರತಿ ತಿಂಗಳು ನೀಡುತ್ತಿರುವ 30 ಕೆ.ಜಿ. ಅಕ್ಕಿಯು ಕಾಳ ಸಂತೆಯಲ್ಲಿ ಮಾರಾಟವಾಗುತ್ತಿರುವ ಬಗ್ಗೆ

ಮತ್ತು

ಶ್ರೀಯುತರುಗಳಾದ ಜಗದೀಶ ಶೆಟ್ಟರ, ಬಸವರಾಜ್ ಬೊಮ್ಮಾಯಿ, ಎಸ್ ಸುರೇಶ್ ಕುಮಾರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಮತ್ತು ಲಕ್ಷ್ಮಣ ಸವದಿ ಹಾಗೂ ಇತರರು ರಾಜ್ಯದಲ್ಲಿ ಜಾರಿಗೆ ತರಲಾದ ಅನ್ನಭಾಗ್ಯ ಯೋಜನೆಯ ನ್ಯೂನತೆಯ ಬಗ್ಗೆ ಹಾಗೂ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರವು ವಿಫಲವಾಗಿರುವ ಬಗ್ಗೆ ಚರ್ಚೆ.

18. ಶ್ರೀಯುತರುಗಳಾದ ಕೆ.ಜಿ.ಬೋಪಯ್ಯ ಮತ್ತು ಎಂ.ಪಿ ಅಪ್ಪಚ್ಚು(ರಂಜನ್) ಅವರುಗಳು ಪಶ್ಚಿಮಘಟ್ಟ ಅರಣ್ಯ ಪ್ರದೇಶವನ್ನು ಯುನೆಸ್ಕೊ ಪಟ್ಟಿಗೆ ಸೇರ್ಪಡಿಸಿರುವ ಬಗ್ಗೆ ಹಾಗೂ ವಿಜ್ಞಾನಿ ಡಾ॥ ಕಸ್ತೂರಿರಂಗನ್ ಅವರು ನೀಡಿರುವ ವರದಿಯ ಸಾಧಕ-ಬಾಧಕಗಳ ಬಗ್ಗೆ ಚರ್ಚೆ.

8. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಬಿ.ಎನ್. ವಿಜಯಕುಮಾರ್ ಅವರು "ಬಿ.ಡಿ.ಎ ವತಿಯಿಂದ ನಿರ್ಮಾಣಗೊಂಡಿರುವ ಬಡಾವಣೆಗಳ" ಬಗ್ಗೆ ದಿನಾಂಕ: 03.12.2013 ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಏಳನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 101(696)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

9. ಖಾಸಗಿ ಸದಸ್ಯರ ಕಾರ್ಯಕಲಾಪಗಳು

I ಖಾಸಗೀ ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ಖಾಲಿ ಭೂಮಿಯ ನಿರಾತಂಕ ಸ್ವಾಧೀನತೆಯ ಸಂರಕ್ಷಣಾ ವಿಧೇಯಕ, 2013
ಶ್ರೀ ಪಿ. ರಾಜೀವ್ **(ವಿಧಾನ ಸಭಾ ಸದಸ್ಯರು) ಅವರು:-**

ಅ) 2013ನೇ ಸಾಲಿನ ಕರ್ನಾಟಕ ಖಾಲಿ ಭೂಮಿಯ ನಿರಾತಂಕ ಸ್ವಾಧೀನತೆಯ ಸಂರಕ್ಷಣಾ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಖಾಲಿ ಭೂಮಿಯ ನಿರಾತಂಕ ಸ್ವಾಧೀನತೆಯ ಸಂರಕ್ಷಣಾ ವಿಧೇಯಕ, 2013
ಶ್ರೀ ಪಿ. ರಾಜೀವ್ **(ವಿಧಾನ ಸಭಾ ಸದಸ್ಯರು) ಅವರು:-**

ಅ) ಕರ್ನಾಟಕ ಖಾಲಿ ಭೂಮಿಯ ನಿರಾತಂಕ ಸ್ವಾಧೀನತೆಯ ಸಂರಕ್ಷಣಾ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ)ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

II ಖಾಸಗೀ ನಿರ್ಣಯಗಳನ್ನು ಮಂಡಿಸುವುದು

1. ***ಶ್ರೀ ಎಸ್.ಆರ್. ವಿಶ್ವನಾಥ್ ಮತ್ತು ಡಾ|| ಕೆ. ಶ್ರೀನಿವಾಸ ಮೂರ್ತಿ ಅವರುಗಳು ಕೆಳಕಂಡ ನಿರ್ಣಯವನ್ನು ಮಂಡಿಸುವುದು.***

"ನಿಗಮಿತ ಸಾಮಾಜಿಕ ಹೊಣೆಗಾರಿಕೆ ಚಟುವಟಿಕೆಗಳ (CSR activities) ಪೈಕಿ ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಬರುವ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿಗಾಗಿ ಸಾರ್ವಜನಿಕ ಉದ್ದಿಮೆಗಳು/ಕಂಪನಿಗಳು/ರಾಜ್ಯ ಸರ್ಕಾರಿ ಸ್ವಾಮ್ಯದ ಉದ್ದಿಮೆಗಳು/ಖಾಸಗಿ ಕಂಪನಿಗಳು, ಪ್ರತಿ ವರ್ಷ ತಮ್ಮ ಲಾಭದ ಅಂಶದಲ್ಲಿ ಒಂದು ಪಾಲಿನ ಕೊಡುಗೆ"ಯನ್ನು ನೀಡುವ ಕುರಿತು ಈ ಸದನವು ನಿರ್ಣಯಿಸುತ್ತದೆ."

ಪು.ತಿ.ನೋ.,

2. ***ಶ್ರೀ ಅಪ್ಪಾಜಿ ನಾಡಗೌಡ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.***

"ಭಾರತ ಸಂವಿಧಾನದ ಕಲಂ 371"ಜೆ"ಗೆ ತಿದ್ದುಪಡಿ ಮಾಡಿ ಹೈದ್ರಬಾದ್-ಕರ್ನಾಟಕ ಭಾಗದ ಅತ್ಯಂತ ಹಿಂದುಳಿದ ಜಿಲ್ಲೆಗಳಾದ ಗುಲ್ಬರ್ಗಾ, ರಾಯಚೂರು, ಬೀದರ್, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಿಗೆ ವಿಶೇಷ ಸ್ಥಾನಮಾನವನ್ನು ನೀಡಿರುವಂತೆ ಅದೇ ಭಾಗಕ್ಕೆ ಹೊಂದಿಕೊಂಡಿರುವ ಮತ್ತು ಅತೀ ಹಿಂದುಳಿದ ಜಿಲ್ಲೆಯಾದ ಬಿಜಾಪುರ ಜಿಲ್ಲೆಯನ್ನು ಸಹ ಸಂವಿಧಾನದ ಕಲಂ 371"ಜೆ" ರಡಿ ಸೇರ್ಪಡಿಸಿ ವಿಶೇಷ ಸ್ಥಾನಮಾನ ನೀಡುವಂತೆ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಈ ಸದನವು ನಿರ್ಣಯಿಸುತ್ತದೆ."

3. ***ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.***

"ವಿಧಾನಸಭಾ ಕ್ಷೇತ್ರಗಳ ಪುನರ್ ವಿಂಗಡಣೆಯನ್ನು ಮಾಡುವಾಗ ಭೌಗೋಳಿಕ ವಿಸ್ತೀರ್ಣ ಮತ್ತು ಪ್ರದೇಶವಾರು ಸಮಸ್ಯೆಗಳನ್ನು ಪರಿಗಣಿಸದೇ ಜನಸಂಖ್ಯೆಯ ಆಧಾರದ ಮೇಲೆ ಪುನರ್ ವಿಂಗಡಣೆಯನ್ನು ಮಾಡಲಾಗಿದ್ದು, ಸರ್ಕಾರದಿಂದ ಅನುದಾನವು ಬಿಡುಗಡೆಯಾಗುವಾಗ ಜನಸಂಖ್ಯೆ ಆಧಾರದ ಮೇಲೆ ಬಿಡುಗಡೆಯಾಗುವುದರಿಂದ ಭೌಗೋಳಿಕವಾಗಿ ಹೆಚ್ಚು ವಿಸ್ತೀರ್ಣವುಳ್ಳ ಮತ್ತು ವಿವಿಧ ರೀತಿಯ ಸಮಸ್ಯೆಗಳಿರುವ ಕ್ಷೇತ್ರಗಳ ಅಭಿವೃದ್ಧಿಗೆ ಇದರಿಂದ ಹಿನ್ನಡೆಯುಂಟಾಗುತ್ತಿದ್ದು ಜನಸಂಖ್ಯೆಯನ್ನು ಆಧಾರವಾಗಿಟ್ಟುಕೊಳ್ಳದೆ ಭೌಗೋಳಿಕ ವಿಸ್ತೀರ್ಣ ಮತ್ತು ಸಮಸ್ಯೆಗಳಿಗನುಗುಣವಾಗಿ ಕ್ಷೇತ್ರಗಳಿಗೆ ಅನುದಾನ ಬಿಡುಗಡೆ ಮಾಡಬೇಕೆಂದು ಅದರಲ್ಲೂ ವಿಶೇಷವಾಗಿ ಭೌಗೋಳಿಕವಾಗಿ ಹೆಚ್ಚು ಸಮಸ್ಯೆ ಇರುವ ಮಲೆನಾಡು ಭಾಗಗಳಿಗೆ ಅಗತ್ಯವಾದ ಅನುದಾನಗಳನ್ನು ಬಿಡುಗಡೆ ಮಾಡಬೇಕೆಂದು" ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಈ ಸದನವು ನಿರ್ಣಯಿಸುತ್ತದೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N